**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ತುಮಕೂರು–ಚಿತ್ರದುರ್ಗ–ದಾವಣಗೆರೆ ಹೊಸ ರೈಲು ಮಾರ್ಗ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ: ಮೂಅಇ 35 ರಾರಾಹೆ 2009, ದಿನಾಂಕ: 24.04.2010
2) ಸರ್ಕಾರದ ಆದೇಶ ಸಂಖ್ಯೆ: ಮೂಅಇ 123 ರಾರಾಹೆ 2014, ದಿನಾಂಕ: 22.06.2016,
3) ಸರ್ಕಾರದ ಆದೇಶ ಸಂಖ್ಯೆ: ಮೂಅಇ 123 ರಾರಾಹೆ 2014, ದಿನಾಂಕ: 28.06.2016, 25.07.2016, 25.08.2016, 24.09.2016, 30.12.2016
4) ಸರ್ಕಾರದ ಆದೇಶ ಸಂಖ್ಯೆ: ಮೂಅಇ 79 ರಾರಾಹೆ 2018, ದಿನಾಂಕ: 23.08.2019. 19.12.2019, 31.12.2019.
5) ಸರ್ಕಾರದ ಆದೇಶ ಸಂಖ್ಯೆ: ಮೂಅಇ 79 ರಾರಾಹೆ 2018(I), (II), (III) ದಿನಾಂಕ: 05.02.2020. 27.03.2020.
6) ಸರ್ಕಾರದ ಆದೇಶ ಸಂಖ್ಯೆ: ಮೂಅಇ 77 ರಾರಾಹೆ 2021(III) ದಿನಾಂಕ: 26.03.2021.
7) ಸರ್ಕಾರದ ಆದೇಶ ಸಂಖ್ಯೆ: ಮೂಅಇ 79 ರಾರಾಹೆ 2018 ದಿನಾಂಕ:13.07.2021, 12.08.2021(I), 12.08.2021(II).
8) ಸರ್ಕಾರದ ಆದೇಶ ಸಂಖ್ಯೆ: ಮೂಅಇ 8 ರಾರಾಹೆ 2021 ದಿನಾಂಕ: 07.02.2022(I), 07.02.2022(II).
9) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಪತ್ರ ಸಂಖ್ಯೆ:ಎಲ್.ಎ.ಕ್ಯೂ:ಸಿಟಿಎ:ಸಿಆರ್ :14/16-17, ದಿನಾಂಕ:06.08.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ತುಮಕೂರು – ದಾವಣಗೆರೆ ರೈಲು ಮಾರ್ಗ ಯೋಜನೆಯನ್ನು ರಾಜ್ಯ ಸರ್ಕಾರ ಹಾಗೂ ರೈಲ್ವೆ ಮಂತ್ರಾಲಯವು ಶೇ:50:50 ವೆಚ್ಚ ಹಂಚಿಕೆ ಆಧಾರದ ಮೇಲೆ ಕೈಗೆತ್ತಿಕೊಳ್ಳಲು ಹಾಗೂ ಈ ಯೋಜನೆಗೆ ಅಗತ್ಯವಿರುವ ಭೂಮಿಯನ್ನು ಉಚಿತವಾಗಿ ನೈರುತ್ಯ ರೈಲ್ವೆಗೆ ನೀಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ತುಮಕೂರು– ದಾವಣಗೆರೆ ರೈಲು ಮಾರ್ಗ ಯೋಜನೆಗಾಗಿ ಒಟ್ಟು ರೂ.1801.00 ಕೋಟಿಗಳ ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಿ ನಿರ್ಮಾಣ ವೆಚ್ಚದಲ್ಲಿ ರಾಜ್ಯ ಸರ್ಕಾರದ ಪಾಲು ಶೇ.50 ರಷ್ಟನ್ನು ಭರಿಸಲು ಮತ್ತು ಅಗತ್ಯವಿರುವ ಭೂಮಿಯನ್ನು ಉಚಿತವಾಗಿ ನೀಡಲು ಹಾಗೂ ಈ ಯೋಜನೆಗೆ ಕರ್ನಾಟಕ ಗಣಿಗಾರಿಕೆ ಪರಿಸರ ಪುನರ್‌ಸ್ಥಾಪನಾ ಮಂಡಳಿ (KMERC) ಯಿಂದ ಮರುಪಾವತಿಸಿಕೊಳ್ಳುವ ಷರತ್ತಿಗೆ ಒಳಪಟ್ಟು ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3, 4, 5, 6, 7& 8)ರ ಸರ್ಕಾರಿ ಆದೇಶಗಳಲ್ಲಿ ತುಮಕೂರು – ದಾವಣಗೆರೆ ಹೊಸ ರೈಲು ಮಾರ್ಗ ಯೋಜನೆಗೆ ಅಗತ್ಯವಿರುವ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ರಾಜ್ಯ ಸರ್ಕಾರದಿಂದ ಈವರೆಗೂ ರೂ.215.94 ಕೋಟಿಗಳನ್ನು ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ ರವರಿಗೆ, ರೂ.58.47 ಕೋಟಿಗಳನ್ನು ಜಿಲ್ಲಾಧಿಕಾರಿ, ಚಿತ್ರದುರ್ಗ

. . 2)

ಜಿಲ್ಲೆ ರವರಿಗೆ, ರೂ.141.00 ಕೋಟಿಯನ್ನು ಜಿಲ್ಲಾಧಿಕಾರಿ ದಾವಣಗೆರೆ ಜಿಲ್ಲೆ ರವರಿಗೆ ಬಿಡುಗಡೆ ಮಾಡಲಾಗಿದೆ. ಒಟ್ಟಾರೆಯಾಗಿ ಈ ಯೋಜನೆಯ ಭೂಸ್ವಾಧೀನಕ್ಕಾಗಿ ರೂ.415.41 ಕೋಟಿಗಳನ್ನು ಹಾಗೂ ನಿರ್ಮಾಣ ಕಾಮಗಾರಿಗಾಗಿ ರೂ.50.00 ಕೋಟಿಗಳನ್ನು ನೈರುತ್ಯ ರೈಲ್ವೆ ಇಲಾಖೆಗೆ ಬಿಡುಗಡೆ ಮಾಡಲಾಗಿದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ (9)ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರು ತುಮಕೂರು – ಚಿತ್ರದುರ್ಗ – ದಾವಣಗೆರೆ ನೂತನ ರೈಲು ಮಾರ್ಗ ಯೋಜನೆಯ ಚಿತ್ರದುರ್ಗ ಜಿಲ್ಲಾ ವಿಭಾಗಕ್ಕೆ ಸಂಬಂಧಿಸಿದ ಚಿತ್ರದುರ್ಗ ಜಿಲ್ಲೆಯ ಹಿರಿಯೂರು, ಐಮಂಗಲ ಹೋಬಳಿ ವ್ಯಾಪ್ತಿಯಲ್ಲಿ ಬರುವ 7 ಗ್ರಾಮಗಳು, ಕಸಬ ಹೋಬಳಿ ವ್ಯಪ್ತಿಯಲ್ಲಿ ಬರುವ 7 ಗ್ರಾಮಗಳು ಮತ್ತು ಜೆ.ಜಿ ಹಳ್ಳಿ ಹೋಬಳಿ ವ್ಯಾಪ್ತಿಯಲ್ಲಿ ಬರುವ 5 ಗ್ರಾಮಗಳು ಒಟ್ಟು 19 ಗ್ರಾಮಗಳಲ್ಲಿ ಜುಮ್ಲಾ ವಿಸ್ತೀರ್ಣ 461-06.12 ಎಕರೆ ಜಮೀನುಗಳಿಗೆ ಐತೀರ್ಪು ರಚಿಸುವ ಹಂತದಲ್ಲಿದ್ದು, ಸದರಿ ಗ್ರಾಮಗಳ ಭೂ ಮಾಲೀಕರಿಗೆ ಪರಿಹಾರ ವಿತರಿಸಲು ಒಟ್ಟು ರೂ.100.00 ಕೋಟಿಗಳನ್ನು ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

5. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಮೂಅಇ 155 ರಾರಾಹೆ 2021 (II)**

**ಬೆಂಗಳೂರು, ದಿನಾಂಕ: 16.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತುಮಕೂರು – ಚಿತ್ರದುರ್ಗ – ದಾವಣಗೆರೆ ಹೊಸ ರೈಲು ಮಾರ್ಗ ಯೋಜನೆಗೆ ಸಂಬಂಧಿಸಿದಂತೆ, ಚಿತ್ರದುರ್ಗ ಜಿಲ್ಲೆಯಲ್ಲಿನ ಭೂಸ್ವಾಧೀನದ ಪ್ರಕ್ರಿಯೆಗೆ ಸಂಬಂಧಿಸಿದಂತೆ ರೂ.19,93,69,773/-ಗಳನ್ನು (ರೂಪಾಯಿ ಹತ್ತೊಂಬತ್ತು ಕೋಟಿ ತೊಂಭತ್ಮೂರು ಲಕ್ಷದ ಅರವತ್ತೊಂಭತ್ತು ಸಾವಿರದ ಏಳುನೂರ ಎಪ್ಪತ್ಮೂರು ರೂಪಾಯಿಗಳು ಮಾತ್ರ) ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

2) ಈ ಮೊತ್ತವನ್ನು 2021-22 ನೇ ಸಾಲಿನಲ್ಲಿ ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಆ.ಇ 605 ಬಿ.ಆರ್.ಎಸ್ 2021, ದಿನಾಂಕ:08.03.2022 ರ ಮೂಲಕ ಒದಗಿಸಿರುವ ಹೆಚ್ಚುವರಿ ಅನುದಾನದ ಲೆಕ್ಕ ಶೀರ್ಷಿಕೆ **"5465-01-190-3-05-132 – ರೈಲ್ವೆ ಯೋಜನೆಗಳ ವೆಚ್ಚ ಹಂಚಿಕೆ – ಬಂಡವಾಳ ವೆಚ್ಚಗಳು"** ಇದರಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸತಕ್ಕದ್ದು.

3) ಈ ಮೊತ್ತವನ್ನು ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಖಾತೆಗೆ ಖಜಾನೆ-2 ರಲ್ಲಿ ಅಪ್‌ಲೋಡ್ ಮಾಡುವುದು. ಸದರಿ ಮೊತ್ತವನ್ನು ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರು ಖಜಾನೆ-2 ರಲ್ಲಿ ಡ್ರಾ ಮಾಡಲು ಅಧೀಕರಿಸಿದೆ.

4) ಉಪ ವಿಭಾಗಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರು ಈ ಹಣವನ್ನು ವೆಚ್ಚ ಮಾಡಿದ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಮೂಲಕ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

. . 3)

5) **ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:** ಆ.ಇ 605 ಬಿ.ಎಸ್.ಆರ್ 2021, ದಿನಾಂಕ:08.03.2022 ರ ಮೂಲಕ ಒದಗಿಸಿರುವ ಹೆಚ್ಚುವರಿ ಅನುದಾನದ ಹಾಗೂ ಪತ್ರ ಸಂಖ್ಯೆ :ಆಇ 01 TFP 2021, ದಿನಾಂಕ:31.12.2021ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್ ಕಲಾವತಿ),
ಸರ್ಕಾರದ ಅಧೀನ ಕಾರ್ಯದರ್ಶಿ-1
ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು
ಜಲಸಾರಿಗೆ ಇಲಾಖೆ.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಆಡಿಟ್-1, 2, 3/ ೦ & ಇ), ಪ್ರಧಾನ ಮಹಾಲೇಖಪಾಲರ ಕಛೇರಿ (ಕರ್ನಾಟಕ), ಎ.ಎ.ಡಿ. ಸೆಕ್ಷನ್, ಮೈನ್ ಬಿಲ್ಡಿಂಗ್, ಕೆ.ಪಿ.ಎಸ್.ಸಿ. ಕಛೇರಿ ಎದುರು, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಭಾಗೀಯ ಆಯುಕ್ತರು ಮತ್ತು ಅಧ್ಯಕ್ಷರು, ಕೆಎಂಇಆರ್‌ಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೋದ್ಯಮ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ವ್ಯವಸ್ಥಾಪಕರು, ನೈರುತ್ಯ ರೈಲ್ವೆ, ಕೇಶವಪುರ, ಹುಬ್ಬಳ್ಳಿ.
6. ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ), ನೈರುತ್ಯ ರೈಲ್ವೆ, ನಂ.18, ಮಿಲ್ಲರ್ಸ್ ರಸ್ತೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ನಿರ್ಮಾಣ (ಉತ್ತರ), ನೈರುತ್ಯ ರೈಲ್ವೆ, ನಂ.18, ಮಿಲ್ಲರ್ಸ್ ರಸ್ತೆ, ಬೆಂಗಳೂರು.
8. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗಣಿಗಾರಿಕೆ ಪರಿಸರ ಪುನರ್‌ಸ್ಥಾಪನಾ ಮಂಡಳಿ, 3ನೇ ಮಹಡಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
10. ವಿಶೇಷ ಭೂಸ್ವಾಧೀನಾಧಿಕಾರಿ, ತುಮಕೂರು- ಚಿತ್ರದುರ್ಗ-ದಾವಣಗೆರೆ ಹೊಸ ರೈಲು ಮಾರ್ಗ ಯೋಜನೆ, ಚಿತ್ರದುರ್ಗ.
11. ಆಯುಕ್ತರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
12. ಉಪನಿರ್ದೇಶಕರು, ಚಿತ್ರದುರ್ಗ ಜಿಲ್ಲಾ ಖಜಾನೆ, ಚಿತ್ರದುರ್ಗ ಜಿಲ್ಲೆ.
13. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1).
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
15. ಸರ್ಕಾರದ ಅಪರ ಕಾರ್ಯದರ್ಶಿ (ರೈಲ್ವೆ) ರವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
16. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
17. ನಿರ್ದೇಶಕರು, ಪಿ.ಪಿ.ಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
18. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.

********